ಕರ್ನಾಟಕ ಸರ್ಕಾರ

(ಕಂದಾಯ ಇಲಾಖೆ)

ಉಪತಹಶೀಲ್ದಾರವರ ನ್ಯಾಯಾಲಯ ನಾಡಕಛೇರಿ ಕೊಟ್ಟೂರು

ಸಂ/ಕಂ/ಹ.ಬ./ನಾಕಕೊ/80/2015-16. ದಿನಾಂಕ:12-07-2016.

| ವಾದಿಗಳು | ಪ್ರತಿವಾದಿಗಳು |
|---|---|
| ಜಿ.ಎಂ.ನೀಲಮ್ಮ ಗಂಡ ಲೇಟ್ ಜಿ.ಎಂ.ವೀರಯ್ಯ<br>ಗೊಲ್ಲರಹಳ್ಳಿ ಗ್ರಾಮ<br>ಕೂಡ್ಲಿಗಿ ತಾಲೂಕು | ಕಂದಾಯ ಪರಿವೀಕ್ಷಕರು<br>ಕೊಟ್ಟೂರು |
| ಕೂಡ್ಲಿಗಿ ತಾಲೂಕು ದೂಪದಹಳ್ಳಿ ಗ್ರಾಮದ ಸನಂ 19ಎ. ವಿಸ್ತೀರ್ಣ 9-01. ಎಕ್ರೆ ಜಮೀನನ್ನು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ದೂಪದಹಳ್ಳಿ ಗ್ರಾಮದ ಸನಂ 19ಎ. ವಿಸ್ತೀರ್ಣ 9-01. ಎಕ್ರೆ ಜಮೀನನ್ನು ಸದರಿ ತಾಲೂಕು ಗೊಲ್ಲರಹಳ್ಳಿ ಗ್ರಾಮದ ಜಿ.ಎಂ.ನೀಲಯ್ಯ ಗಂಡ ಲೇಟ್ ಜಿ.ಎಂ.ವೀರಯ್ಯ ಇವರು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ದೂಪದಹಳ್ಳಿ ಇವರು ನಮೂನೆ-21 ನೋಟಿಸನ್ನು ದಿನಾಂಕ 24-09-2015 ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಪಟ್ಟದಾರರಾದ ಜಿ.ಎಂ.ವೀರಯ್ಯ ಇವರಿಗೆ ಇಬ್ಬರು ಹೆಂಡತಿಯರಿದ್ದು ಎರಡನೇ ಹೆಂಡತಿ ಮಾತ್ರ ಅರ್ಜಿ ಸಲ್ಲಿಸಿರುವ ಕಾರಣ ಈ ಪ್ರಕರಣವನ್ನು ಎಂ.ಆರ್.ನಂಬರ್: 26/2015-16.. ದಿನಾಂಕ 22-10-2015 ರಲ್ಲಿ ಗೈರು ಮಂಜೂರು ಮಾಡಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 29-12-2015 ರಿಂದ 12-07-2016 ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಹಾಜರಾಗಿರುತ್ತಾರೆ. ಅರ್ಜಿದಾರರು ದೂಪದಹಳ್ಳಿ ಗ್ರಾಮದ ಸನಂ 19ಎ. ವಿಸ್ತೀರ್ಣ 9-01. ಎಕ್ರೆ ಜಮೀನು ನನ್ನ ಗಂಡನಾದ ಜಿ.ಎಂ.ವೀರಯ್ಯ ತಂದೆ ದೊಡ್ಡಬಸಯ್ಯ ಇವರ ಹೆಸರಲ್ಲಿ ಲೆಕ್ಕ ದಾಖಲೆ ಪಟ್ಟಾ ಇದ್ದು ಇವರು ದಿನಾಂಕ 12-08-2005 ರಂದು ನಿಧನ ಹೊಂದಿರುವ ಕಾರಣ ಪೋತಿವಾರಸು ಹಕ್ಕಿನ ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ಹೇಳಿಕೆಗಳನ್ನು ಕೇಳಿ ಸದರಿ ಜಮೀನಿನ ಪಟ್ಟದಾರರಾದ ಜಿ.ಎಂ.ವೀರಯ್ಯ ಇವರಿಗೆ ಇಬ್ಬರು ಹೆಂಡತಿಯರಿದ್ದು ಎರಡನೇ ಹೆಂಡತಿ ಮಾತ್ರ ಅರ್ಜಿ ಸಲ್ಲಿಸಿರುವ ಕಾರಣ ಅರ್ಜಿದಾರರ ಕೋರಿಕೆಯನ್ನು ತಿರಸ್ಕರಿಸುತ್ತಾ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

## –:ಆದೇಶ:–

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ದೂಪದಹಳ್ಳಿ ಗ್ರಾಮದ ಸನಂ 19ಎ. ವಿಸ್ತೀರ್ಣ 9–01. ಎಕ್ರೆ ಜಮೀನಿನ ಪಟ್ಟದಾರರಾದ ಜಿ.ಎಂ.ವೀರಯ್ಯ ಇವರಿಗೆ ಇಬ್ಬರು ಹೆಂಡತಿಯರಿದ್ದು ಎರಡನೇ ಹೆಂಡತಿ ಮಾತ್ರ ಅರ್ಜಿ ಸಲ್ಲಿಸಿರುವ ಕಾರಣ ಅರ್ಜಿದಾರರ ಕೋರಿಕೆಯನ್ನು ತಿರಸ್ಕರಿಸುತ್ತಾ ಯಥಾಸ್ಥಿತಿಯಂತೆ ಮುಂದುವರೆಸಲು ಆದೇಶಿಸಿ ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ಈ ಹಂತದಲ್ಲಿ ಮುಕ್ತಾಯಗೊಳಿಸಲು ಆದೇಶಿಸಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 12–07–2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರರು
ನಾಡಕಛೇರಿ ಕೊಟ್ಟೂರು

ಇದರ ಪ್ರತಿಯನ್ನು:

1) ಅರ್ಜಿದಾರರಾದ ಜಿ.ಎಂ.ನೀ[illegible] ಗೌಡ ಲೇಟ್ ಜಿ.ಎಂ.ವೀರಯ್ಯ ಗೊಲ್ಲರಹಳ್ಳಿ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ಕಂದಾಯ ಪರಿವೀಕ್ಷಕರು ಕೊಟ್ಟೂರು ಇವರಿಗೆ ಮಾಹಿತಿಗಾಗಿ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.